ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿನಾಂಕ:16.09.2016.

ಸಂಖ್ಯೆ: ಕಾಶಿಇ/ಶೈವಿ/98/ವಿವಿಧ ಸ್ಪರ್ಧೆ/2016-17

# ಸುತ್ತೋಲೆ

ವಿಷಯ: 57th Ramnarayan Chellaram Annual Inter-Collegiate Quiz – "ROTOQUIZ 2016 ನಲ್ಲಿ ವಿದ್ಯಾರ್ಥಿಗಳು ಭಾಗವಹಿಸುವ ಬಗ್ಗೆ.

ಉಲ್ಲೇಖ: ರೋಟರಿ ಕ್ಲಬ್, ಬೆಂಗಳೂರು ಇವರ ದಿನಾಂಕ ರಹಿತ ಪತ್ರ.

* * * * * *

ರೋಟರಿ ಕ್ಲಬ್, ಬೆಂಗಳೂರು ಇವರು ಬೆಂಗಳೂರಿನ ರೋಟರ‍್ಯಾಕ್ಟ್ ಕ್ಲಬ್‌ನ ಸಹಯೋಗದೊಂದಿಗೆ ಸಾಮಾನ್ಯ ಜ್ಞಾನ ಮತ್ತು ಸಾಮಾನ್ಯ ಅರಿವು ಇವುಗಳಿಗೆ ಸಂಬಂಧಿಸಿದಂತೆ ದಿನಾಂಕ:25 ಮತ್ತು 26 ನೇ ಸೆಪ್ಟಂಬರ್ 2016 ರಂದು ರೋಟರಿ ಕ್ಲಬ್, ಎನ್.ಪಿ-20, ಲ್ಯಾವೆಲ್ಲೆ ರಸ್ತೆ, ಬೆಂಗಳೂರು ಇಲ್ಲಿ 57th Ramnarayan Chellaram Annual Inter-Collegiate Quiz – **"ROTOQUIZ 2016"** ನ್ನು ಆಯೋಜಿಸಿದ್ದು, ಸದರಿ ಸ್ಪರ್ಧೆಯಲ್ಲಿ ಪದವಿ ಹಾಗೂ ಸ್ನಾತಕೋತ್ತರ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಆಸಕ್ತ ಪ್ರತಿಭಾನ್ವಿತ ವಿದ್ಯಾರ್ಥಿಗಳು (ಪ್ರತಿ ಕಾಲೇಜಿನಿಂದ 2 ಟೀಮ್‌ನಂತೆ ಒಟ್ಟು 4 ಜನ ಮಾತ್ರ) ಭಾಗವಹಿಸಲು ಅನುಮತಿ ನೀಡಲಾಗಿದೆ. ಸದರಿ ಸ್ಪರ್ಧೆಯಲ್ಲಿ ಭಾಗವಹಿಸಲು ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ಕಳುಹಿಸಲು ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳು ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಗಿದೆ.

ಸ್ಪರ್ಧೆಯ ವಿವರಗಳ ಮಾಹಿತಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಶ್ರೀ ಪ್ರಕಾಶ್, ದೂ:9845202190, ಇ-ಮೇಲ್ ವಿಳಾಸ:rotoquiz@gmail.com ಸಂಪರ್ಕಿಸಬಹುದಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ- ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ)- ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾ.ಶಿ.ಆ. ಕಛೇರಿ, ಬೆಂಗಳೂರು- ಕೂಡಲೇ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮವಹಿಸುವುದು.

ಪ್ರತಿಯನ್ನು:-

3. Rtn. Sukhen Padmanabha, Director, Youth Services Committee, Rotary Club of Bangalore. No.20, Lavelle Road, Bengaluru-560001.
4. ಕಛೇರಿ ಪ್ರತಿ.